# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(2)ಪಿಆರ್/265/2016–17
2019–20

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 31/8/19

## ಸುತ್ತೋಲೆ

ವಿಷಯ: 2019ನೇ ಸಾಲಿನ ನಾಡಪ್ರಭು ಕೆಂಪೇಗೌಡ ದಿನಾಚರಣೆಯನ್ನು ಆಚರಿಸುತ್ತಿರುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ 2019ನೇ ಸಾಲಿನಲ್ಲಿ ನಾಡಪ್ರಭು ಕೆಂಪೇಗೌಡ ದಿನಾಚರಣೆಯನ್ನು ದಿನಾಂಕ: 04–09–2019ರಂದು ಡಾ॥ ರಾಜ್‌ಕುಮಾರ್ ಗಾಜಿನ ಮನೆ, ನಗರ ಪಾಲಿಕೆ ಕೇಂದ್ರ ಕಛೇರಿ ಆವರಣ, ಬೆಂಗಳೂರು ಇಲ್ಲಿ ಆಚರಿಸುತ್ತಿದ್ದು, ಸದರಿ ಕಾರ್ಯಕ್ರಮಕ್ಕೆ ಕೇಂದ್ರ ಕಛೇರಿ ಮತ್ತು 08 ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳು ಕಡ್ಡಾಯವಾಗಿ ಬೆಳಿಗ್ಗೆ 11.00 ಗಂಟೆಯಿಂದ ಕಾರ್ಯಕ್ರಮ ಮುಕ್ತಾಯವಾಗುವವರೆವಿಗೂ ಭಾಗವಹಿಸಲು ಹಾಗೂ ಒಂದು ವೇಳೆ ನಾಡಪ್ರಭು ಕೆಂಪೇಗೌಡ ದಿನಾಚರಣೆ ಕಾರ್ಯಕ್ರಮಕ್ಕೆ ಗೈರು ಹಾಜರಾದಲ್ಲಿ ಅಂತಹ ಅಧಿಕಾರಿ / ನೌಕರರುಗಳ ವೇತನವನ್ನು (ದಿನಾಂಕ: 04–09–2019ರಂದು) ಒಂದು ದಿನ ಕಡ್ಡಾಯವಾಗಿ ಕಟಾವುಗೊಳಿಸಲಾಗುವುದೆಂದು ಸೂಚಿಸಲು ಮಾನ್ಯ ಆಯುಕ್ತರವರಿಂದ ನಿರ್ದೇಶಿಸಲ್ಪಟ್ಟಿರುತ್ತೇನೆ.

ಮುಂದುವರೆದು, ಎಲ್ಲಾ ವಲಯ ಅಪರ/ಜಂಟಿ ಆಯುಕ್ತರುಗಳು ಕೇಂದ್ರ ಕಛೇರಿಯ ಬಟವಾಡೆ ಅಧಿಕಾರಿಗಳು ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳಿಗೆ ನಾಡಪ್ರಭು ಕೆಂಪೇಗೌಡ ದಿನಾಚರಣೆಯಲ್ಲಿ ಭಾಗವಹಿಸುವ / ಭಾಗವಹಿಸಿರುವ ಬಗ್ಗೆ ಹಾಜರಾತಿಯನ್ನು ಪಡೆದು ಈ ಕಛೇರಿಗೆ ವರದಿ ಸಲ್ಲಿಸಲು ತಿಳಿಸಿದೆ.

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು :
- : ಪೂಜ್ಯ ಮಹಾಪೌರರು ರವರುಗಳ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
- : ಮಾನ್ಯ ಉಪ ಮಹಾಪೌರರು ರವರುಗಳ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
- : ಮಾನ್ಯ ಆಯುಕ್ತರು/ವಿಶೇಷ ಆಯುಕ್ತರು(ಯೋಜನೆ/ಹಣಕಾಸು/ ಘನತ್ಯಾಜ್ಯ/ಆಸ್ತಿಗಳು/ವಿದ್ಯಾ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
- : ಮಾನ್ಯ ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
- : ಕೌನ್ಸಿಲ್ ಕಾರ್ಯದರ್ಶಿ, ರವರಿಗೆ ಕಳುಹಿಸುತ್ತಾ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರು ಹಾಗೂ ಎಲ್ಲಾ ಸ್ಥಾಯಿ ಸಮಿತಿ ಅಧ್ಯಕ್ಷರು ರವರ ಅವಗಾಹನೆಗೆ ತರಲು ಕಳುಹಿಸಿದೆ.
- : ಜಂಟಿ ಆಯುಕ್ತರು (ಘನತ್ಯಾಜ್ಯ/ಹಣಕಾಸು/ಕಂದಾಯ) ರವರ ಅವಗಾಹನೆಗೆ ಕಳುಹಿಸಿದೆ.
- : ಎಲ್ಲಾ ವಲಯ ಅಪರ/ಜಂಟಿ ಆಯುಕ್ತರುಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
- : ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸುತ್ತಾ, ತಮ್ಮ ಅಧೀನದ ಎಲ್ಲಾ ಸಿಬ್ಬಂದಿಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಸೂಚಿಸಿದೆ.
- : ಸಾರ್ವಜನಿಕ ಸಂಪರ್ಕಾಧಿಕಾರಿ ರವರಿಗೆ ಸೂಕ್ತ ಕ್ರಮಕೈಗೊಳ್ಳಲು ಕಳುಹಿಸಿದೆ.
- : ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದೆ.
- : ಮು.ಲೆ.ಅ/ಮು.ಲೆ.ಪ/ ಎಲ್ಲಾ ವಲಯ ಉ.ನಿ(ಹಣಕಾಸು) ರವರಿಗೆ ಕಳುಹಿಸಿದೆ.
- : ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್ ನಲ್ಲಿ ಅಳವಡಿಸಲು ಸೂಚಿಸಿದೆ.
- : ಕಛೇರಿ ಪ್ರತಿ.